# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 966 |
| ಸದಸ್ಯರ ಹೆಸರು | ಶ್ರೀ ಕೆ.ಪಿ.ನಂಜುಂಡಿ ವಿಶ್ವಕರ್ಮ |
| ಉತ್ತರಿಸುವ ದಿನಾಂಕ | 13-12-2023 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

********

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಾವಿರಾರು ದೇವಸ್ಥಾನಗಳ ನಿರ್ಮಾಣಕ್ಕೆ ಕಾರಣಕರ್ತರಾದ ವಿಶ್ವಕರ್ಮ ಜನಾಂಗದವರಿಗೆ (ಕಬ್ಬಿಣ, ಮರ, ಕಂಚು, ಚಿನ್ನ, ಬೆಳ್ಳಿ, ಶಿಲ್ಪಿ) ರಾಜ್ಯದ ದೇವಸ್ಥಾನಗಳ ಆಡಳಿತ ಮಂಡಳಿಯಲ್ಲಿ ಅವಕಾಶ ಮಾಡಿಕೊಡುವುದಕ್ಕೆ ಕಾನೂನು ಹಾಗೂ ಸರ್ಕಾರ ಆದೇಶದಲಿ ತಿದ್ದುಪಡಿ ತರುವುವಾಗಿ ಕಳೆದ ಅಧಿವೇಶನದಲ್ಲಿ ಆಶ್ವಾಸನೆ ನೀಡಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು? (ವಿವರ ನೀಡುವುದು) | ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ರ ಕಲಂ 25 ರಡಿಯಲ್ಲಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಅದರನ್ವಯ, ಸದರಿ ವ್ಯವಸ್ಥಾಪನಾ ಸಮಿತಿಗೆ ಈ ಕೆಳಗಿನವರನ್ನು ಸದಸ್ಯರನ್ನಾಗಿ ನೇಮಕಗೊಳಿಸಬೇಕಾಗಿರುತ್ತದೆ.<br>1. ಒಂದು ದೇವಾಲಯದ ಸಂಬಂಧದಲ್ಲಿ ಪ್ರಧಾನ ಅರ್ಚಕ ಅಥವಾ ಅರ್ಚಕ.<br>2. ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟಿಗೆ ಸೇರಿದವರ ಪೈಕಿಯಿಂದ ಕೊನೇ ಪಕ್ಷ ಒಬ್ಬರು.<br>3. ಇಬ್ಬರು ಮಹಿಳೆಯರು.<br>4. ಸಂಸ್ಥೆಯು ಇರುವ ಸ್ಥಳದಲ್ಲಿ ವಾಸಿಸುತ್ತಿರುವ ವ್ಯಕ್ತಿಗಳ ಪೈಕಿಯಿಂದ ಕೊನೇ ಪಕ್ಷ-ಒಬ್ಬರು-ಸದಸ್ಯರುಗಳನ್ನು ಹೊಂದಿರತಕ್ಕದ್ದು. ಸಾಮಾನ್ಯ ವರ್ಗಕ್ಕೆ ಸೇರಿದ ಇತರ ನಾಲ್ಕು ಸದಸ್ಯರುಗಳನ್ನು ಹೊಂದಿರತಕ್ಕದ್ದು.<br>ಅಧಿಸೂಚಿತ ಸಂಸ್ಥೆಗಳಿಗೆ ವ್ಯವಸ್ಥಾಪನಾ ಸಮಿತಿಯನ್ನು ಮೇಲಿನಂತೆ ಸಂದರ್ಭಾನುಸಾರ ರಾಜ್ಯ ಧಾರ್ಮಿಕ ಅಥವಾ ಜಿಲ್ಲಾ ಧಾರ್ಮಿಕ ಪರಿಷತ್ ವತಿಯಿಂದ ಕಾಯ್ದೆಯ ಸೆಕ್ಷನ್ 25 ರಡಿಯಲ್ಲಿ ನೇಮಕ ಮಾಡಲಾಗುತ್ತಿದೆ. ವ್ಯವಸ್ಥಾಪನಾ ಸಮಿತಿಗೆ ಸದಸ್ಯರನ್ನು ಮೇಲ್ಕಂಡಂತೆ |

| | | |
|---|---|---|
| | | ನಿಗಧಿಪಡಿಸಿರುವ ಮೀಸಲಾತಿಯನ್ವಯ ನೇಮಕ ಮಾಡಬೇಕಾಗಿರುತ್ತದೆ.<br><br>ಮುಂದುವರೆದು, ಕಳೆದ ಅಧಿವೇಶನದಲ್ಲಿ ನೀಡಿದ ಅಶ್ವಾಸನೆಯಂತೆ, ದೇವಾಲಯಗಳ ವ್ಯವಸ್ಥಾಪನಾ ಸಮಿತಿಯಲ್ಲಿ ಒಬ್ಬರು ವಿಶ್ವ ಕರ್ಮ ಜನಾಂಗದವರಿಗೆ ಅವಕಾಶ ಮಾಡಿಕೊಡುವ ಬಗ್ಗೆ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ಅಧಿನಿಯಮ 2011ರ ಸೆಕ್ಷನ್ 25ಕ್ಕೆ ಅಗತ್ಯ ತಿದ್ದುಪಡಿ ತರುವ ಸಂಬಂಧ ಕರಡು ತಿದ್ದುಪಡಿ ಮಸೂದೆಯನ್ನು ಸಿದ್ದಪಡಿಸಿದ್ದು, ಕಾನೂನು ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |

ಸಂಖ್ಯೆ: ಕಂಇ 127 ಮುಸಪ್ರ 2023

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು